ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

-2-

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 24/1/21

# ಉಪಸಭಾಪತಿ ಸ್ಥಾನಕ್ಕೆ ಕೈ ಅಭ್ಯರ್ಥಿ

ಸಂ.ಕ.ಸಮಾಚಾರ ಬೆಂಗಳೂರು

ರಾಜಕೀಯ ಸ್ಥಿತ್ಯಂತರದ ನಿರೀಕ್ಷೆಯೊಂದಿಗೆ ಮೇಲ್ಮನೆ ಉಪಸಭಾಪತಿ ಸ್ಥಾನಕ್ಕೆ ಅಭ್ಯರ್ಥಿ ಕಣಕ್ಕಿಳಿಸಲು ಕಾಂಗ್ರೆಸ್ ಗಂಭೀರ ಚಿಂತನೆ ನಡೆಸಿದೆ. ಈ ಹಿಂದೆ ಜೆಡಿಎಸ್ ಮೈತ್ರಿಯಿಂದ ಸಭಾಪತಿ ಕಾಂಗ್ರೆಸ್ ಪಕ್ಷಕ್ಕೆ ದಕ್ಕಿದ್ದರೆ ಉಪಸಭಾಪತಿ ಜೆಡಿಎಸ್‌ಗೆ ಹೋಗಿತ್ತು.

ವಿಧಾನ ಮಂಡಲದ ಜಂಟಿ ಅಧಿವೇಶನ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಜನವರಿ 28 ರಂದು ಬೆಳಗ್ಗೆ 9 ಗಂಟೆಗೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆಯಲಾಗಿದೆ. ವಿಧಾನ ಪರಿಷತ್ ಉಪ ಸಭಾಪತಿ ಚುನಾವಣೆಗೆ ಅಭ್ಯರ್ಥಿ ಕಣಕ್ಕಿಳಿಸುವ ಕುರಿತು ಅಂದೇ ತೀರ್ಮಾನ ಹೊರಬೀಳಲಿದೆ.

**ಶಾಸಕಾಂಗ ಸಭೆಯಲ್ಲಿ ತೀರ್ಮಾನ**

ನಾವು ರಾಜ್ಯದ ಎಲ್ಲ ವಿದ್ಯಮಾನ ಗಮನಿಸುತ್ತಿದ್ದೇವೆ. ಉಪಸಭಾಪತಿ ಧರ್ಮೇಗೌಡರು ಆತ್ಮಹತ್ಯೆಯಂತಹ ತೀರ್ಮಾನಕ್ಕೆ ಬರಬಾರದಿತ್ತು. ಇದರಿಂದ ಎಲ್ಲರಿಗೂ ನೋವಾಗಿದೆ. ನಾವು ಶಾಸಕಾಂಗ ಪಕ್ಷದ ಸಭೆಯಲ್ಲಿ ಆ ಸ್ಥಾನದ ಗೌರವ, ಪಕ್ಷದ ಹಿತದೃಷ್ಟಿ, ಸಮಿತಿ ನೀಡಿರುವ ವರದಿ ಗಮನದಲ್ಲಿಟ್ಟುಕೊಂಡು ಪಕ್ಷದಿಂದ ಸೂಕ್ತ ತೀರ್ಮಾನ ಮಾಡುತ್ತೇವೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ತನ್ಮಧ್ಯೆ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು, ಪರಿಶಿಷ್ಟ ಜಾತಿಯ ಎಡಗೈ ಗುಂಪಿನ ನಾಯಕರಿಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಹುದ್ದೆ ನೀಡಬೇಕು. ಇದು ನನ್ನ ಅಭಿಪ್ರಾಯ ಎಂದಿದ್ದಾರೆ. ಬಿಜೆಪಿಗೆ ವಲಸೆ ಹೋದವರಿಗೆ ಈಗ ಅತೃಪ್ತಿ ಕಾಡುತ್ತಿದೆ. ಪ್ರಳಯವಾದರೂ ಸರಿ, ವಾಪಸ್ ಅವರನ್ನು ಕಾಂಗ್ರೆಸ್‌ಗೆ ಮತ್ತೆ ಸೇರಿಸುವುದಿಲ್ಲ ಎಂದು ಹೇಳಿದ್ದೆ. ಅದಕ್ಕೆ ಈಗಲೂ ಬದ್ಧನಾಗಿದ್ದೇನೆ ಎಂದಿದ್ದಾರೆ.